# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 380

ಉತ್ತರಿಸಬೇಕಾದ ದಿನಾಂಕ : 17.07.2019

ಸದಸ್ಯರ ಹೆಸರು : ಶ್ರೀ ಆರ್ ಪ್ರಸನ್ನ ಕುಮಾರ್, (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1. | ಶಿವಮೊಗ್ಗ ಜಿಲ್ಲೆ ಮತ್ತು ದಾವಣೆಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ನುರಿತ ಕುಸ್ತಿಪಟುಗಳಿದ್ದು, ಅವರುಗಳಿಗೆ ಹಾಲಿ ನೀಡುತ್ತಿರುವ ಮಾಸಾಶನ ಎಷ್ಟು; (ವಿವರ ನೀಡುವುದು) | ಶಿವಮೊಗ್ಗ ಜಿಲ್ಲೆಯಲ್ಲಿ ರಾಜ್ಯ ಮಟ್ಟದ 73 ಮಾಜಿ ಕುಸ್ತಿ ಪೈಲ್ವಾನರು, ರಾಷ್ಟ್ರ ಮಟ್ಟದ 13 ಮಾಜಿ ಕುಸ್ತಿ ಪೈಲ್ವಾನರು ಹಾಗೂ ಅಂತಾರಾಷ್ಟ್ರೀಯ ಮಟ್ಟದ 01 ಮಾಜಿ ಕುಸ್ತಿ ಪೈಲ್ವಾನರುಗಳಿಗೆ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನಲ್ಲಿ ರಾಜ್ಯ ಮಟ್ಟದ 03 ಮಾಜಿ ಕುಸ್ತಿ ಪೈಲ್ವಾನರುಗಳಿಗೆ ಸರ್ಕಾರಿ ಮಾರ್ಗಸೂಚಿನ್ವಯ ಮಾಸಾಶನವನ್ನು ನೀಡಲಾಗುತ್ತಿದೆ. (ಸದರಿ ಸರ್ಕಾರಿ ಆದೇಶದ ಪ್ರತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ) |
| 2 | ಹಾಲಿ ನೀಡುತ್ತಿರುವ ಮಾಸಾಶನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು) | ಇಲ್ಲ |
| 3 | ಕುಸ್ತಿಪಟುಗಳಿಗೆ ಎಷ್ಟು ಪ್ರಮಾಣದಲ್ಲಿ ಭತ್ಯೆಯನ್ನು ಹೆಚ್ಚಿಸಲಾಗುವುದು? | ಅನ್ವಯಿಸುವುದಿಲ್ಲ. |

ವೈಎಸ್ ಡಿ-/17/2019

(ಕೆ. ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಾಜಿ ಕುಸ್ತಿ ಪೈಲ್ವಾನರುಗಳಿಗೆ ಮಾಸಾಶನ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಯುಸೇಇ 202 ಯುಸೇಕ್ರೀ 2014, ದಿನಾಂಕ:24.06.2017
2. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ: ಡಿವೈಎಸ್ಎಸ್/ಮಾ..ಕು.ಪೈ.ಮಾ/ಕ್ರೀ.ಕ.ಪಂ/03/2017-18 ದಿನಾಂಕ:22.03.2017.

******

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಮಾಜಿ ಕುಸ್ತಿ ಪೈಲ್ವಾನರುಗಳಿಗೆ ಈ ಕೆಳಕಂಡಂತೆ ಮಾಸಾಶನ ನಿಗಧಿಪಡಿಸಲಾಗಿದೆ.

| ವಿವರ | ಪ್ರಸ್ತುತ ನೀಡಲಾಗುತ್ತಿರುವ ಮೊತ್ತ |
|---|---|
| ರಾಜ್ಯ ಮಟ್ಟ | ರೂ.1500/- |
| ರಾಷ್ಟ್ರ ಮಟ್ಟ | ರೂ.2000/- |
| ಅಂತರರಾಷ್ಟ್ರೀಯ ಮಟ್ಟ | ರೂ.3000/- |

2017-18ನೇ ಸಾಲಿನ ಮಾನ್ಯ ಮುಖ್ಯ ಮಂತ್ರಿಗಳ ಆಯವ್ಯಯ ಭಾಷಣದ ಕಂಡಿಕೆ 279ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.

**"ಮಾಜಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರ ರಾಷ್ಟ್ರೀಯ ಕುಸ್ತಿ ಪೈಲ್ವಾನರುಗಳಿಗೆ ನೀಡುತ್ತಿರುವ ಮಾಸಾಶನವನ್ನು ಕ್ರಮವಾಗಿ 1500 ರೂ.ಗಳಿಂದ 2500 ರೂ.ಗಳಿಗೆ, 2000ರೂ.ಗಳಿಂದ 3000ರೂ.ಗಳಿಗೆ ಹಾಗೂ 3000 ರೂಗಳಿಂದ 4000 ರೂ.ಗಳಿಗೆ ಹೆಚ್ಚಿಸಲಾಗುವುದು"**

ಮೇಲೆ ಓದಲಾದ (2)ರ ದಿನಾಂಕ:22.03.2017ರ ನಿರ್ದೇಶಕರ ಪ್ರಸ್ತಾವನೆಯಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಮಾಜಿ ಕುಸ್ತಿ ಪೈಲ್ವಾನರುಗಳ ಮಾಸಾಶನವನ್ನು ಹೆಚ್ಚಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ:

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 96 ಯುಸೇಕ್ರೀ 2017**

**ಬೆಂಗಳೂರು, ದಿನಾಂಕ: 19.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2017-18ನೇ ಸಾಲಿನಿಂದ ಅನ್ವಯವಾಗುವಂತೆ ರಾಜ್ಯ/ರಾಷ್ಟ್ರ/ಅಂತರರಾಷ್ಟ್ರೀಯ ಮಟ್ಟದ ಮಾಜಿ ಕುಸ್ತಿ ಪೈಲ್ವಾನರುಗಳ ಮಾಸಾಶನವನ್ನು

---2

ಈ ಕೆಳಕಂಡಂತೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

| ವಿವರ | ಪ್ರಸ್ತುತ ನೀಡಲಾಗುತ್ತಿರುವ ಮೊತ್ತ | 2017-18ನೇ ಸಾಲಿನಿಂದ ಅನ್ವಯವಾಗುವಂತೆ ಹೆಚ್ಚಿಸಿದ ಮೊತ್ತ |
|---|---|---|
| ರಾಜ್ಯ ಮಟ್ಟ | ರೂ.1500/- | ರೂ.2500/- |
| ರಾಷ್ಟ್ರ ಮಟ್ಟ | ರೂ.2000/- | ರೂ.3000/- |
| ಅಂತರರಾಷ್ಟ್ರೀಯ ಮಟ್ಟ | ರೂ.3000/- | ರೂ.4000/- |

ಈ ಸಂಬಂಧದ ವೆಚ್ಚಗಳನ್ನು ಲೆಕ್ಕ ಶೀರ್ಷಿಕೆ: "2205-00-104-0-30-100 ಕಷ್ಟ ಪರಿಸ್ಥಿತಿಯಲ್ಲಿರುವ ಪೈಲ್ವಾನರುಗಳಿಗೆ ಆರ್ಥಿಕ ನೆರವು (ಯೋಜನೆ)" ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆ.ಇ. 339 ವೆಚ್ಚ-7/2017, ದಿನಾಂಕ:22.04.2017ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್. ಪ್ರಭುಶಂಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಇವರಿಗೆ:
1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಪಿ.ಬಿ. ನಂ.5329, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಜಿ & ಎಸ್.ಎಸ್.ಎ), ಕರ್ನಾಟಕ, ಪಿ.ಬಿ. ನಂ.5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಇ & ಆರ್.ಎಸ್.ಎ), ಕರ್ನಾಟಕ, ಪಿ.ಬಿ. ನಂ.5398, ಬೆಂಗಳೂರು.
4. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7 & 8), ವಿಧಾನಸೌಧ ಬೆಂಗಳೂರು.
7. ಮಾನ್ಯ ಮೀನುಗಾರಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.